# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 7/6/2010

# ಪ್ರಕಾಶ್ ಶೆಟ್ಟಿಗೆ ಮೇಲ್ಮನೆ ಟಿಕೆಟ್
## ಮತ್ತೊಂದು ಸ್ಥಾನಕ್ಕೆ ಕತ್ತಿ ವರ್ಸಸ್ ಕೋರೆ



**ಬೆಂಗಳೂರು:** ವಿಧಾನಸಭೆಯಿಂದ ರಾಜ್ಯಸಭೆಯ ನಾಲ್ಕು ಸ್ಥಾನಗಳಿಗೆ ಜೂ.19 ರಂದು ನಡೆಯಲಿರುವ ಚುನಾವಣೆಗೆ ಬಿಜೆಪಿ ರಾಜ್ಯ ಕೋರ್ ಕಮಿಟಿ ಶನಿವಾರ ಸಂಭಾವ್ಯ ಅಭ್ಯರ್ಥಿಗಳ ಪಟ್ಟಿ ಅಂತಿಮಗೊಳಿಸಿದೆ. ಒಂದು ಸ್ಥಾನಕ್ಕೆ ಹೋಟೆಲ್ ಉದ್ಯಮಿ ಪ್ರಕಾಶ್ ಶೆಟ್ಟಿ ಹೆಸರು ಅಂತಿಮಗೊಂಡಿದ್ದು, ಮತ್ತೊಂದು ಸ್ಥಾನಕ್ಕೆ ಹಾಲಿ ಸದಸ್ಯ ಪ್ರಭಾಕರ ಕೋರೆ ಅಥವಾ ಮಾಜಿ ಸಂಸದ ರಮೇಶ್ ಕತ್ತಿ ಹೆಸರನ್ನು ಪರಿಗಣಿಸುವಂತೆ ಶಿಫಾರಸು ಮಾಡಲಾಗಿದೆ. ಕತ್ತಿ ಸೋದರರ ಒತ್ತಡ ತೀವ್ರವಾಗಿರುವ ಹಿನ್ನೆಲೆಯಲ್ಲಿ ಕೋರ್ ಕಮಿಟಿ ಸಮತೋಲನದ ಹೆಜ್ಜೆ ಇರಿಸಿದೆ. ದೇವೇಗೌಡರು ಸ್ಪರ್ಧಿಸಿದರೆ ಮೂರನೇ ಅಭ್ಯರ್ಥಿಯನ್ನು ಕಣಕ್ಕಿಳಿಸದಿರಲು ಬಿಜೆಪಿ ನಿರ್ಧರಿಸಿದೆ.

ವಿವರ»05